ಕರ್ನಾಟಕ ಸರ್ಕಾರ

# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ,

# ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001

ಸಂಖ್ಯೆ: ಸಿ3(7) ಪ್ರಾ.ಶಿ-ವರ್ಗ-07/2017-18 ದಿನಾಂಕ: 16-03-2018

: ಜ್ಞಾಪನ :

ವಿಷಯ:- 2017-18ನೇ ಸಾಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವೃಂದದ ಶಿಕ್ಷಕರುಗಳಿಗೆ ಕಡ್ಡಾಯ ಮತ್ತು ಕೋರಿಕೆ ವರ್ಗಾವಣೆ ಮಾಡಲು ಕ್ರಮವಹಿಸುವ ಬಗ್ಗೆ :

ಉಲ್ಲೇಖ:-1) ಕರ್ನಾಟಕ ಸಿವಿಲ್ ಸೇವೆಗಳು(ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ ಸಂಖ್ಯೆ: ಇಡಿ 12 ಇಟಿಆರ್ 2017 ದಿನಾಂಕ: 29/11/2017.

2) ಪ್ರಾಥಮಿಕ ಶಾಲಾ ಶಿಕ್ಷಕರ ವರ್ಗಾವಣಾ ಮಾರ್ಗಸೂಚಿ :ಸಿ3(7) ಪ್ರಾಶಾಶಿ ವರ್ಗ-07/2017-18 ದಿನಾಂಕ: 29/12/2017 ತಿದ್ದುಪಡಿಗಳ ಸಹಿತ

3) ಪ್ರೌಢ ಶಾಲಾ ಶಿಕ್ಷಕರ ವರ್ಗಾವಣಾ ಮಾರ್ಗಸೂಚಿ ಸಿ4(7) ಪ್ರೌಶಿ ವರ್ಗ-29/2017-18 ದಿನಾಂಕ: 01/01/2018 ತಿದ್ದುಪಡಿಗಳ ಸಹಿತ

4) ಈ ಕಛೇರಿ ಜ್ಞಾಪನ ಪತ್ರ ಸಮಸಂಖ್ಯೆ ದಿನಾಂಕ: 09/02/2018.

----*****----

ವಿಷಯದನ್ವಯದ ದಿನಾಂಕ 13/03/2018ರ ಜ್ಞಾಪನವನ್ನು ಹಿಂಪಡೆಯಲಾಗಿದ್ದು ಪ್ರಸ್ತುತ ಜ್ಞಾಪನವನ್ನು ಹೊರಡಿಸಲಾಗಿದೆ.

2017-18 ನೇ ಸಾಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವರ್ಗಾವಣೆಗೆ ಸಂಬಂಧಿಸಿದಂತೆ ವಿಸ್ತೃತ ಮಾರ್ಗಸೂಚಿಯನ್ನು ಪ್ರಕಟಿಸಲಾಗಿದೆ. ಚಾಲ್ತಿಯಲ್ಲಿರುವ ವರ್ಗಾವಣೆ ನಿಯಮಗಳ ಪ್ರಕಾರ ಕೈಗೊಳ್ಳಬೇಕಾದ ಕ್ರಮಗಳ ಕುರಿತಂತೆ ವರ್ಗಾವಣಾ ಪ್ರಾಧಿಕಾರಿಗಳ ಗಮನಕ್ಕೆ ಹಾಗೂ ಶಿಕ್ಷಕರ ಗಮನಕ್ಕೆ ಈಗಾಗಲೇ ಉಲ್ಲೇಖಿತ (2) ಮತ್ತು (3) ರ ವರ್ಗಾವಣಾ ಮಾರ್ಗಸೂಚಿಯಲ್ಲಿ ವಿವರಿಸಲಾಗಿದೆ. ತಿದ್ದುಪಡಿಗಳನ್ನೊಳಗೊಂಡಂತೆ ವರ್ಗಾವಣಾ ಮಾರ್ಗಸೂಚಿಯಲ್ಲಿರುವ ಎಲ್ಲ ಅಂಶಗಳನ್ನು ಮತ್ತೊಮ್ಮೆ ಪರಿಶೀಲಿಸಿಕೊಳ್ಳಲು ಸೂಚಿಸಿದೆ. ಮುಂದುವರೆದು ಕೆಳಗಿನಂತೆ ಕೆಲವು ಹೆಚ್ಚುವರಿ ಸೂಚನೆಗಳನ್ನು ನೀಡಿದೆ.

1. ಉಲ್ಲೇಖಿತ (4) ರಲ್ಲಿನ ಪ್ಯಾರಾ 4 ರಲ್ಲಿ 'ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯಿಂದ ಮಾನ್ಯತೆ ಪಡೆದ' ಎಂಬ ಅಂಶವನ್ನು ಕೈಬಿಟ್ಟಿದ್ದು 'ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಕರ ಅಥವಾ ನೌಕರರ ಸಂಘದ ಚುನಾಯಿತ ಪದಾಧಿಕಾರಿ'ಗಳು ಎಂದು ಓದಿಕೊಳ್ಳತಕ್ಕದ್ದು. ಉಳಿದಂತೆ ಯಾವುದೇ ಬದಲಾವಣೆ ಇರುವುದಿಲ್ಲ.
2. ಉಲ್ಲೇಖಿತ(2) ರ ಪುಟ ಸಂಖ್ಯೆ 5 ಪ್ಯಾರಾ 4 ರಲ್ಲಿ ಹಾಗೂ ಉಲ್ಲೇಖಿತ(3) ರ ಪುಟ ಸಂಖ್ಯೆ 4 ಪ್ಯಾರಾ 1 ರಲ್ಲಿ ಪ್ರಸ್ತಾಪಿಸಿರುವಂತೆ 15 ನೇ ನಿಯಮದಡಿಯಲ್ಲಿ ಬಿಡುಗಡೆಯಾದ ಶಿಕ್ಷಕರು ಎಂದರೆ ಆಗ ಚಾಲ್ತಿಯಲ್ಲಿದ್ದ ನಿಯಮ-11 ರನ್ವಯ ಕೌನ್ಸಿಲಿಂಗ್ ಮೂಲಕ ಹುದ್ದೆ ಆಯ್ಕೆ ಮಾಡಿಕೊಳ್ಳುವ ಪ್ರಕ್ರಿಯೆಯಲ್ಲಿ ಪಾಲ್ಗೊಂಡ ಶಿಕ್ಷಕರು ಎಂಬುದಾಗಿ ಸ್ಪಷ್ಟಪಡಿಸಿದೆ.

ಮೇಲಿನ ಅಂಶಗಳನ್ನು ವರ್ಗಾವಣಾ ಪ್ರಾಧಿಕಾರಿಗಳು ಗಮನಿಸಿ ಅದರಂತೆ ಕ್ರಮವಹಿಸಲು ತಿಳಿಸಿದೆ.

ನಿರ್ದೇಶಕರು (ಪ್ರೌಢ ಶಿಕ್ಷಣ) ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

ಇವರಿಗೆ,

1) ಸಹ ನಿರ್ದೇಶಕರು, ಬೆಂಗಳೂರು/ಮೈಸೂರು/ಅಪರ ಆಯುಕ್ತರ ಕಛೇರಿ ಕಲ್ಬುರ್ಗಿ/ಧಾರವಾಡ ಇವರಿಗೆ ಅಗತ್ಯ ಕ್ರಮಕ್ಕಾಗಿ
2) ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಮುಂದಿನ ಕ್ರಮಕ್ಕಾಗಿ
3) ಕ್ಷೇತ್ರ ಶಿಕ್ಷಣಾಧಿಕಾರಿಯವರಿಗೆ (ಉಪನಿರ್ದೇಶಕರ ಮುಖಾಂತರ)

ಪ್ರತಿಯನ್ನು:-

1. ಸರ್ಕಾರದ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ಇವರಿಗೆ ವಂದನಾ ಪೂರ್ವಕವಾಗಿ ಸಲ್ಲಿಸಿದೆ.

2. ಆಪ್ತ ಕಾರ್ಯದರ್ಶಿಯವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ ಮಾಹಿತಿಗಾಗಿ ಕಳುಹಿಸಿದೆ.
5. ಸಹ ನಿರ್ದೇಶಕರು (ಆಡಳಿತ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
6. ಆಪ್ತ ಕಾರ್ಯದರ್ಶಿಯವರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
7. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ/ಧಾರವಾಡ
8. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ
9. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರು ಹಾಗೂ ಪದನಿಮಿತ್ತ ವಿಭಾಗೀಯ ಕಾರ್ಯದರ್ಶಿಗಳು
10. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.
11. ಮುಖ್ಯಸ್ಥರು, ಇ–ಗೌರ್ನೆನ್ಸ್, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು–ಪ್ರಸಕ್ತ ವರ್ಗಾವಣೆಗಳಿಗೆ ಈಗಾಗಲೇ ಸಭೆಯಲ್ಲಿ ಸೂಚಿಸಿರುವಂತೆ "ತಂತ್ರಾಂಶವನ್ನು" ಸಜ್ಜುಗೊಳಿಸಿ ಅಗತ್ಯ ತಾಂತ್ರಿಕ ಸಹಕಾರವನ್ನು ಒದಗಿಸಲು ಸಂಬಂಧಿತ ತಂಡವನ್ನು ನಿಯೋಜಿಸಲು ಮತ್ತು ವೇಳಾಪಟ್ಟಿಯಂತೆ ಅಗತ್ಯ ಕ್ರಮ ಕೈಗೊಳ್ಳಲು ಕೋರಿದೆ.
12. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ), ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್)
13. ರಾಜ್ಯದ ಎಲ್ಲಾ ತಾಲ್ಲೂಕ್ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ
14. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಅಗತ್ಯ ಕ್ರಮಕ್ಕಾಗಿ
15. ಇಲಾಖಾ ವೆಬ್–ಸೈಟ್ನಲ್ಲಿ ರಾಜ್ಯದ ಎಲ್ಲ ಶಿಕ್ಷಕರ ಮತ್ತು ಇತರೆ ಸಾರ್ವಜನಿಕರ ಮಾಹಿತಿಗೆ ಪ್ರಕಟಣೆಗೆ
16. ಕಛೇರಿ ಪ್ರತಿ.